


# ಕಾರ್ಯಕ್ರಮಗಳು

### 1. ಫಲಪುಷ್ಪ ಪ್ರದರ್ಶನದ ಉದ್ಘಾಟನೆ:

ವೀರರಾಣಿ ಕಿತ್ತೂರು ಚನ್ನಮ್ಮ ಮತ್ತು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ವಿಷಯಾಧಾರಿತ ಸ್ವಾತಂತ್ರ್ಯೋತ್ಸವ 218ನೇ ಫಲಪುಷ್ಪ ಪ್ರದರ್ಶನವನ್ನು ದಿನಾಂಕ 07-08-2025ರ ಗುರುವಾರ, ಬೆಳಿಗ್ಗೆ 10.00 ಗಂಟೆಗೆ, ಲಾಲ್‌ಬಾಗ್‌ನಲ್ಲಿರುವ ಗಾಜಿನ ಮನೆಯಲ್ಲಿ, ಸನ್ಮಾನ್ಯ ಶ್ರೀ ಸಿದ್ದರಾಮಯ್ಯನವರು, ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ ರವರು ಉದ್ಘಾಟಿಸಲಿದ್ದಾರೆ. ಸನ್ಮಾನ್ಯ ಶ್ರೀ ಡಿ.ಕೆ. ಶಿವಕುಮಾರ್, ಮಾನ್ಯ ಉಪಮುಖ್ಯಮಂತ್ರಿಗಳು, ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ಬೆಂಗಳೂರು ನಗರ ಉಸ್ತುವಾರಿ ಸಚಿವರು, ಕರ್ನಾಟಕ ಸರ್ಕಾರ ರವರು, ಸನ್ಮಾನ್ಯ ಶ್ರೀ ಎಸ್.ಎಸ್. ಮಲ್ಲಿಕಾರ್ಜುನ್, ಮಾನ್ಯ ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು, ಕರ್ನಾಟಕ ಸರ್ಕಾರ, ಶ್ರೀ ರಾಮಲಿಂಗಾರೆಡ್ಡಿ, ಮಾನ್ಯ ಸಾರಿಗೆ ಹಾಗೂ ಮುಜರಾಯಿ ಸಚಿವರು, ಕರ್ನಾಟಕ ಸರ್ಕಾರ, ರವರುಗಳು ಗೌರವಾನ್ವಿತ ಅತಿಥಿಗಳಾಗಿರುತ್ತಾರೆ.

ಶ್ರೀ ಮಡಿವಾಳ ರಾಜಯೋಗೀಂದ್ರ ಸ್ವಾಮೀಜಿಯವರು, ರಾಜಗುರು ಕಲ್ಮಠ, ಚನ್ನಮ್ಮನ ಕಿತ್ತೂರು ಬೆಳಗಾವಿ ಜಿಲ್ಲೆ, ಇವರು ಹಾಗೂ ಶ್ರೀ ವಚನಾನಂದ ಸ್ವಾಮೀಜಿ, ಪೀಠಾಧ್ಯಕ್ಷರು, ಪಂಚಮಶಾಲಿ ಜಗದ್ಗುರುಪೀಠ, ಹರಿಹರ, ದಾವಣಗೆರೆ ರವರು ವಿಶೇಷ ಆಹ್ವಾನಿತರಾಗಿ ಭಾಗವಹಿಸಲಿದ್ದಾರೆ.

ಶ್ರೀ ಉದಯ್ ಬಿ. ಗರುಡಾಚಾರ್, ಮಾನ್ಯ ಶಾಸಕರು, ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ ರವರು ಅಧ್ಯಕ್ಷತೆ ವಹಿಸಲಿದ್ದಾರೆ. ಬೆಂಗಳೂರು ದಕ್ಷಿಣ ಕ್ಷೇತ್ರದ ಮಾನ್ಯ ಲೋಕಸಭಾ ಸದಸ್ಯರಾದ ಶ್ರೀ ತೇಜಸ್ವಿ ಸೂರ್ಯ ರವರು, ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಟಿ.ಎ. ಶರವಣ ಮತ್ತು ಶ್ರೀ ರಾಮೋಜಿಗೌಡ ರವರು ಮತ್ತು ಶ್ರೀಮತಿ ಡಾ. ಶಾಲಿನಿ ರಜನೀಶ್, ಭಾ.ಆ.ಸೇ., ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ಹಾಗೂ ಡಾ. ಶಮ್ಲಾ ಇಕ್ಬಾಲ್, ಭಾ.ಆ.ಸೇ., ಸರ್ಕಾರದ ಕಾರ್ಯದರ್ಶಿಗಳು, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ ರವರುಗಳು ಆದರಣೀಯ ಆಹ್ವಾನಿತರಾಗಿ ಆಗಮಿಸಲಿದ್ದಾರೆ.

### 2. ಇಕೆಬಾನ, ತರಕಾರಿ ಕೆತ್ತನೆ, ಪುಷ್ಪಭಾರತಿ, ಬೋನ್ಸಾಯ್, ಡಚ್ ಹೂವಿನ ಜೋಡಣೆ, ಥಾಯ್‌ಆರ್ಟ್, ಜಾನೂರು ಮತ್ತು ಪೂರಕ ಕಲೆಗಳ ಪ್ರದರ್ಶನದ ಉದ್ಘಾಟನೆ:

ಫಲಪುಷ್ಪ ಪ್ರದರ್ಶನದ ಜೊತೆಗೆ ಇಕೆಬಾನ, ತರಕಾರಿ ಕೆತ್ತನೆ, ಪುಷ್ಪಭಾರತಿ, ಬೋನ್ಸಾಯ್, ಡಚ್ ಹೂವಿನ ಜೋಡಣೆ, ಥಾಯ್ ಆರ್ಟ್, ಜಾನೂರು ಜೋಡಣೆಯ ಕಲೆಗಳ ಸ್ಪರ್ಧೆಗಳ ಪ್ರದರ್ಶನವನ್ನು ತೋಟಗಾರಿಕೆ ಮಾಹಿತಿ ಕೇಂದ್ರ, ಲಾಲ್‌ಬಾಗ್‌ನಲ್ಲಿ ಏರ್ಪಡಿಸಲಾಗಿದೆ. ದಿನಾಂಕ: 09-08-2025ರ ಶನಿವಾರ ಮಧ್ಯಾಹ್ನ 1.00 ಗಂಟೆಗೆ ಉದ್ಘಾಟನಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಡಾ: ಆರತಿ ಕೃಷ್ಣ, ಉಪಾಧ್ಯಕ್ಷರು, ಅನಿವಾಸಿ ಭಾರತೀಯ ಸಮಿತಿ, ಕರ್ನಾಟಕ ಅವರು ಈ ಪ್ರದರ್ಶನವನ್ನು ಉದ್ಘಾಟಿಸಲಿದ್ದಾರೆ.

### 3. ಬಹುಮಾನ ವಿತರಣಾ ಸಮಾರಂಭ:

ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ ವಿಜೇತರಾದವರಿಗೆ ದಿನಾಂಕ: 16-08-2025ರ ಶನಿವಾರ ಮಧ್ಯಾಹ್ನ 2.30 ಗಂಟೆಗೆ, ಡಾ: ಎಂ.ಹೆಚ್.ಮರಿಗೌಡ ಸ್ಮಾರಕ ಭವನ, ಲಾಲ್‌ಬಾಗ್, ಬೆಂಗಳೂರು, ಇಲ್ಲಿ ಬಹುಮಾನ ವಿತರಣಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಶ್ರೀ ಉದಯ್ ಬಿ. ಗರುಡಾಚಾರ್, ಮಾನ್ಯ ಶಾಸಕರು, ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ ರವರು ಅಧ್ಯಕ್ಷತೆ ವಹಿಸಲಿದ್ದಾರೆ.

ಶ್ರೀಮತಿ ಡಾ. ಶಮ್ಲಾ ಇಕ್ಬಾಲ್, ಭಾ.ಆ.ಸೇ., ಸರ್ಕಾರದ ಕಾರ್ಯದರ್ಶಿಗಳು, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ, ಕರ್ನಾಟಕ ಸರ್ಕಾರ ಹಾಗೂ ಡಾ: ಪುರೋಷತ್ತಮ ಬಿಳಿಮಲೆ, ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಕರ್ನಾಟಕ ಸರ್ಕಾರ ಇವರು ಬಹುಮಾನಗಳನ್ನು ವಿತರಿಸಲಿದ್ದಾರೆ.

ಫಲಪುಷ್ಪ ಪ್ರದರ್ಶನದ ರೂಪರೇಷೆಯನ್ನು ಸಿದ್ಧಪಡಿಸಲು ಶ್ರೀ ಮಡಿವಾಳ ರಾಜಯೋಗೀಂದ್ರ ಸ್ವಾಮೀಜಿಯವರು, ರಾಜಗುರು ಕಲ್ಮಠ, ಚನ್ನಮ್ಮನ ಕಿತ್ತೂರು ಬೆಳಗಾವಿ ಜಿಲ್ಲೆ, ಇವರು ಸೇರಿದಂತೆ ಹಲವಾರು ಸಂಪನ್ಮೂಲ ವ್ಯಕ್ತಿಗಳು, ಸಂಘ ಸಂಸ್ಥೆಗಳು, ಕಿತ್ತೂರು ರಾಣಿ ಚನ್ನಮ್ಮ ಮತ್ತು ಸಂಗೊಳ್ಳಿ ರಾಯಣ್ಣ ಪ್ರಾಧಿಕಾರಗಳು, ಸರ್ಕಾರಿ ಇಲಾಖೆಗಳು ಸಕ್ರಿಯವಾಗಿ ಭಾಗವಹಿಸಿ ಸಲಹೆ-ಸಹಕಾರ ನೀಡಿರುತ್ತಾರೆ. ಅವರೆಲ್ಲರಿಗೂ ತೋಟಗಾರಿಕೆ ಇಲಾಖೆಯು ಕೃತಜ್ಞತೆಗಳನ್ನು ಸಲ್ಲಿಸುತ್ತದೆ.

ಫಲಪುಷ್ಪ ಪ್ರದರ್ಶನದ ಪರಿಕಲ್ಪನೆ ಮತ್ತು ಸಾಹಿತ್ಯವನ್ನು ಪರಿಶೀಲಿಸಿ, ಯೋಜಿತ ಪರಿಕಲ್ಪನೆಗೆ ಅನುಗುಣವಾಗಿ ವಿವಿಧ ಕಾರ್ಯಕ್ರಮಗಳ ಆಯೋಜನೆಗೆ ಹೆಗಲು ಕೊಟ್ಟು ಸಹಕರಿಸಿದ ಡಾ. ಬಿ.ಆರ್. ಸತ್ಯನಾರಾಯಣ, ಗ್ರಂಥಪಾಲಕರು, ಸುರಾನಾ ಕಾಲೇಜು (ಸ್ವಾಯತ್ತ), ಬೆಂಗಳೂರು, ಪುತ್ಥಳಿ ಮತ್ತು ಪ್ರತಿಮೆಗಳ ಪ್ರದರ್ಶನಕ್ಕೆ ತಾಂತ್ರಿಕ ಮಾರ್ಗದರ್ಶನ ನೀಡಿ ಕೆಲವು ಪ್ರತಿಮೆಗಳನ್ನು ಸಹಾ ನೀಡಿ ಸಹಕರಿಸಿದ 'ಆಕಾರ' ಸಂಸ್ಥೆಯ ಖ್ಯಾತ ಶಿಲ್ಪಿ ಶ್ರೀ ಬಿ.ಸಿ. ಶಿವಕುಮಾರ್, ಪ್ರದರ್ಶನಕ್ಕೆ ಪ್ರಾಯೋಜಕತ್ವ ನೀಡಿ ಸಹಕರಿಸಿದ ವಿವಿಧ ಸಂಸ್ಥೆಗಳು, ಗಾಜಿನ ಮನೆಯಲ್ಲಿ ಆಕರ್ಷಕ ಹೂ ಗಿಡಗಳ ಪ್ರದರ್ಶನಕ್ಕೆ ಸಹಕರಿಸಿರುವ ಇಂಡೋ ಅಮೇರಿಕನ್ ಹೈಬ್ರಿಡ್ ಸೀಡ್ಸ್ ಕಂಪನಿಯ ಶ್ರೀಮತಿ ರಶ್ಮಿ ಅತ್ತಾವರ್, ಭಾಗ್ಯಲಕ್ಷ್ಮಿ ಫಾರಂ, ದಿ ನರ್ಸರಿಮೆನ್ ಕೋ-ಆಪರೇಟಿವ್ ಸೊಸೈಟಿ ಫಲಪುಷ್ಪ ಪ್ರದರ್ಶನದ ಆಯೋಜನೆಗೆ ಸಹಕಾರ ನೀಡಿರುವ ಸರ್ವರನ್ನೂ ತೋಟಗಾರಿಕೆ ಇಲಾಖೆಯು ಕೃತಜ್ಞತಾಪೂರ್ವಕವಾಗಿ ನೆನೆಯುತ್ತದೆ.

**ಈ ಬಾರಿಯ ಫಲಪುಷ್ಪ ಪ್ರದರ್ಶನಕ್ಕೆ ಸುಮಾರು 9 ರಿಂದ 10 ಲಕ್ಷಕ್ಕೂ ಹೆಚ್ಚು ವೀಕ್ಷಕರು ಆಗಮಿಸುವ ನಿರೀಕ್ಷೆಯಿದೆ.**